# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2373 (2036)

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ಉತ್ತರಿಸುವ ದಿನಾಂಕ : 22.03.2022

| ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಬೃಹತ್ ಹಾಗೂ ಮಧ್ಯಮ ಕೈಗಾರಿಕೆಗಳು ಕಳೆದ 02 ವರ್ಷಗಳಿಂದ ಕೋವಿಡ್ ಸಮಯದಲ್ಲಿ ಭಾರೀ ಹಿನ್ನಡೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಕೈಗಾರಿಕೆಗಳು ಕಳೆದ 02 ವರ್ಷಗಳಿಂದ ಕೋವಿಡ್ ಸಮಯದಲ್ಲಿ ಹಿನ್ನಡೆಯಾಗಿರುವುದು ಗಮನಕ್ಕೆ ಬಂದಿದೆ.<br>ಕರ್ನಾಟಕ ಸರ್ಕಾರವು ಕೊರೋನಾದಿಂದ ತೊಂದರೆಯಾಗಿರುವ ಉದ್ಯಮಗಳಿಗೆ ಪ್ರೋತ್ಸಾಹ ನೀಡಲು ಈ ಕೆಳಗಿನ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. |
| ಆ | ಬಂದಿದ್ದಲ್ಲಿ, ಕೈಗಾರಿಕೆಗಳನ್ನು ಉನ್ನತೀಕರಿಸಲು ಸರ್ಕಾರವು ಹಮ್ಮಿಕೊಂಡ ಯೋಜನೆಗಳಾವುವು; | ➢ ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ" ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು "ಇ.ಸಿ.ಎಲ್.ಜಿ"-ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದು, ಇದರನ್ವಯ ಫೆಬ್ರವರಿ 2020 ರ ಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ 20 ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡಲಾಗುತ್ತಿದೆ.<br>➢ ರಾಜ್ಯ ಸರ್ಕಾರದ ಇಂಧನ ಇಲಾಖೆಯು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಎಪ್ರಿಲ್ ಮತ್ತು ಮೇ 2020 ತಿಂಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.<br>➢ ಇಂಧನ ಇಲಾಖೆಯು ವಿದ್ಯುತ್ ಬಿಲ್‌ನ್ನು ಪ್ರಾಮಾಣಿಕವಾಗಿ ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ.<br>➢ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು ಮಾರ್ಚ್, ಎಪ್ರಿಲ್ ಮತ್ತು ಮೇ 2020 ತಿಂಗಳಲ್ಲಿ ಪಾವತಿಸದಿದ್ದಲ್ಲಿ ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ವಿಧಿಸುವುದಿಲ್ಲ.<br>➢ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಏಪ್ರಿಲ್-2020 ಮತ್ತು ಮೇ-2020 ತಿಂಗಳುಗಳ ಕಂತನ್ನು ಮುಂದೂಡಿದ 3 ತಿಂಗಳಲ್ಲಿ |

| | | |
|---|---|---|
| | | ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ.<br>➢ ಕೊರೋನಾ 2ನೇ ಅಲೆಯ ನಂತರ ರಾಜ್ಯ ಸರ್ಕಾರದ ಇಂಧನ ಇಲಾಖೆಯ ದಿನಾಂಕ 21.06.2021 ರ ಆದೇಶದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಪಾವತಿಸಬೇಕಾದ ಮೇ-2021 ಮತ್ತು ಜೂನ್-2021 ತಿಂಗಳ ಬೇಡಿಕೆ/ನಿಗಧಿತ ಶುಲ್ಕವನ್ನು ಮನ್ನಾ ಮಾಡಿರುತ್ತದೆ.<br><br>ಕಳೆದ 2 ವರ್ಷದಿಂದ ಕೈಗಾರಿಕೆಗಳನ್ನು ಉನ್ನತೀಕರಿಸಲು ಸರ್ಕಾರದಿಂದ ಉತ್ತೇಜನ/ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರವು 13.08.2020 ರಂದು ಹೊಸ ಕೈಗಾರಿಕಾ ನೀತಿ 2020-25ನ್ನು ಘೋಷಿಸಿರುತ್ತದೆ. ಇದರಡಿಯಲ್ಲಿ ಅನೇಕ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತಿದೆ. |
| ಇ | ಕೈಗಾರಿಕಾ ವಲಯದಲ್ಲಿ ಕಳೆದ 02 ವರ್ಷಗಳಿಂದ ವಾರ್ಷಿಕ ಬೆಳವಣಿಗೆಯ ಪ್ರಮಾಣ ಎಷ್ಟು; | ಕರ್ನಾಟಕ ಆರ್ಥಿಕ ಸಮೀಕ್ಷೆ 2021-22 ರಂತೆ ಕೈಗಾರಿಕಾ ವಲಯದಲ್ಲಿ 2020-21ನೇ ಸಾಲಿನಲ್ಲಿ ಬೆಳವಣಿಗೆ ದರವು ಶೇ.(-)5.5 ಇದ್ದು, 2021-22ನೇ ಸಾಲಿನಲ್ಲಿ ಶೇ.7.4 ಬೆಳವಣಿಗೆ ಇರುತ್ತದೆ. |
| ಈ | ಕೈಗಾರಿಕಾ ವಲಯಗಳಲ್ಲಿ ಉದ್ಯೋಗವನ್ನು ಸೃಷ್ಟಿ ಮಾಡಲು ಸರ್ಕಾರದ ಕ್ರಮಗಳೇನು? | ರಾಜ್ಯದಲ್ಲಿ ಯುವ ಜನರ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಹಾಗೂ ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರವು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ಕೈಗಾರಿಕೆಗಳನ್ನು ಸ್ಥಾಪಿಸುವವರಿಗೆ ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡುವ ಬಗ್ಗೆ ಕೈಗಾರಿಕಾ ನೀತಿ 2020-25ನ್ನು ಹೊರತರಲಾಗಿದೆ.<br>• ದೇಶ ವಿದೇಶಗಳ ಹಲವಾರು ಪ್ರತಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಮಾನ್ಯ ಕೈಗಾರಿಕಾ ಸಚಿವರು/ಅಪರ ಮುಖ್ಯ ಕಾರ್ಯದರ್ಶಿಗಳ/ ಕೈಗಾರಿಕಾಭಿವೃದ್ದಿ ಅಯುಕ್ತರ ನೇತೃತ್ವದಲ್ಲಿ ಸರಣಿ ಸಭೆಗಳನ್ನು ನಡೆಸಲಾಗುತ್ತಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಎನ್.ಓ.ಸಿಗಳನ್ನು ಪಡೆಯಲು 3 ವರ್ಷಗಳವರೆಗೆ ಸಮಯವನ್ನು ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002ನ್ನು ತಿದ್ದುಪಡಿ ತರಲಾಗಿದೆ. |

**ಸಿಐ 86 ಎಸ್‌ಪಿಐ 2022**

(ಡಾ॥ ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು